ಎಂ.ವಿ.ಸಿ. ನಂ.144/2022 ರಲ್ಲಿ
ಆರ್.ಡಬ್ಲ್ಯೂ-1(ಮಧುಮತಿ ಹೆಗ್ಡೆ)

ದಿನಾಂಕ 12.01.2024 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ 2 ನೇ ಎದುರುದಾರರ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

2. 1 ನೇ ಎದುರುದಾರರ ವಾಹನದ ವಿಮೆಯ ಪ್ರತಿಯನ್ನು ನಿಆರ್-1, ಚನ್ನಪಟ್ಟಣ ಆಸ್ಪತ್ರೆಯಿಂದ ನೀಡಲಾದ ಎಂ.ಎಲ್.ಸಿ ಯ ಯಥಾ ನಕಲನ್ನು ನಿಆರ್-2, ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಆರ್-3 ಎಂದು ಗುರುತಿಸಲಾಯಿತು. ನಮ್ಮ ಕಂಪನಿಯ ವಿರುದ್ಧ ಅರ್ಜಿಯನ್ನು ವಜಾಗೊಳಿಸುವಂತೆ ಕೋರುತ್ತೇನೆ.

ಪಾಟೀ ಸವಾಲುಃ-

ಅರ್ಜಿದಾರರ ಪರ ವಕೀಲರ ಮನವಿಯ ಮೇರೆಗೆ ಮುಂದುವರೆದ ಪಾಟೀ ಸವಾಲನ್ನು ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯ ಮಂಡಳಿಯ
ಪೀಠಾಧಿಕಾರಿಗಳು.